# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲ್ಲೂಕಿನ ತೀರ್ಥಮತ್ತೂರು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನವನ್ನು ರಾಮಕೃಷ್ಣಾಪುರ ಗ್ರಾಮಕ್ಕೆ ಬದಲಾಯಿಸುವ ಕುರಿತು-ಆದೇಶ

ಓದಲಾಗಿದೆ: ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ ಇವರ ಪತ್ರ ಸಂಖ್ಯೆ ನಂ:ಚು(4).ಸಿಆರ್.32/16-17, ದಿನಾಂಕ: 07.12.2017.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರದಲ್ಲಿ ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ ಇವರು ತಾಲ್ಲೂಕು ಪಂಚಾಯತಿ ತೀರ್ಥಹಳ್ಳಿ ಹಾಗೂ ತಹಶೀಲ್ದಾರ್ ತೀರ್ಥಹಳ್ಳಿ ರವರು ಸಲ್ಲಿಸಿದ ವರದಿಯಲ್ಲಿ ತೀರ್ಥಹಳ್ಳಿ ತಾಲ್ಲೂಕಿನ ತೀರ್ಥಮತ್ತೂರು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನವನ್ನು ತೀರ್ಥಮತ್ತೂರು ಗ್ರಾಮದಿಂದ ಇದೇ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಮುತ್ತುವಳ್ಳಿ ಮಜರೆ ರಾಮಕೃಷ್ಣಾಪುರಕ್ಕೆ ಬದಲಾಯಿಸಲು ಪ್ರಸ್ತಾವನೆ ಸಲ್ಲಿಸಿದ್ದಾರೆ. ಸದರಿ ವರದಿಯನ್ವಯ ತೀರ್ಥಮತ್ತೂರು ಗ್ರಾಮವು ಗ್ರಾಮ ಪಂಚಾಯತಿಯ ಕೊನೆಯ ಭಾಗದಲ್ಲಿ ಇದ್ದು, ಈ ಗ್ರಾಮವು ಯಾವುದೇ ಮೂಲಭೂತ ಸೌಕರ್ಯವನ್ನು ಹೊಂದಿರುವುದಿಲ್ಲ. ಈ ಸಂಬಂಧ ಗ್ರಾಮ ಪಂಚಾಯತಿ ತೀರ್ಥಮತ್ತೂರು ಹಾಗೂ ಸಾರ್ವಜನಿಕರು ಕೇಂದ್ರ ಸ್ಥಾನವನ್ನು ರಾಮಕೃಷ್ಣಾಪುರಕ್ಕೆ ಸ್ಥಳಾಂತರಿಸಲು ಕೋರಿಕೆ ಸಲ್ಲಿಸಿರುತ್ತಾರೆ.

ರಾಮಕೃಷ್ಣಾಪುರ ಗ್ರಾಮದಲ್ಲಿ ಬ್ಯಾಂಕ್ ಸೌಲಭ್ಯ, ಸಹಕಾರ ಸಂಘಗಳು, ಗ್ರಾಮ ಲೆಕ್ಕಾಧಿಕಾರಿ ಕಛೇರಿ, ಆರೋಗ್ಯ ಕೇಂದ್ರ, ನೆಮ್ಮದಿ ಕೇಂದ್ರ, ಅಂಚೆ ಕಛೇರಿ, ನಿರಂತರ ಬಸ್ ಸೌಲಭ್ಯ ಹಾಗೂ ಸರ್ವೆ ನಂ. 84 ರಲ್ಲಿ ಗ್ರಾಮ ಪಂಚಾಯತಿ ಕಟ್ಟಡ ಮುಂತಾದ ಮೂಲಸೌಲಭ್ಯಗಳಿದ್ದು, ಈ ಕಟ್ಟಡದಲ್ಲಿ ಗ್ರಾಮ ಪಂಚಾಯತಿಯ ಕಾರ್ಯಚಟುವಟಿಕೆಗಳನ್ನು ನಡೆಸಲು ಅವಕಾಶವಿರುವುದಾಗಿ ತಿಳಿಸಿದ್ದಾರೆ.

ಆಡಳಿತಾತ್ಮಕ ಅನುಕೂಲತೆ ಹಾಗೂ ಸಾರ್ವಜನಿಕ ಹಿತದೃಷ್ಟಿಯಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ನಿಯಮ 4(2)(ಸಿ) ರನ್ವಯ ತೀರ್ಥಮತ್ತೂರು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನವನ್ನು ರಾಮಕೃಷ್ಣಾಪುರ ಗ್ರಾಮಕ್ಕೆ ಬದಲಾವಣೆ ಮಾಡುವ ಬಗ್ಗೆ ಸರ್ಕಾರಕ್ಕೆ ಜಿಲ್ಲಾಧಿಕಾರಿಗಳು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿದ್ದು ಸಾರ್ವಜನಿಕರು ಗ್ರಾಮ ಪಂಚಾಯತಿಯಲ್ಲಿ ತಮ್ಮ ಕೆಲಸ ಕಾರ್ಯಗಳಿಗೆ ಸಂಚರಿಸಲು ಹತ್ತಿರವಿರುವುದರಿಂದ ಮತ್ತು ಆಡಳಿತಾತ್ಮಕ ಕಾರಣಗಳಿಂದಾಗಿ ಶಿವಮೊಗ್ಗ ಜಿಲ್ಲೆಯ, ತೀರ್ಥಹಳ್ಳಿ ತಾಲ್ಲೂಕಿನ ತೀರ್ಥಮತ್ತೂರು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನವನ್ನು ತೀರ್ಥಮತ್ತೂರು ಗ್ರಾಮದಿಂದ ರಾಮಕೃಷ್ಣಾಪುರ ಗ್ರಾಮಕ್ಕೆ ಬದಲಾವಣೆ ಮಾಡಬೇಕಾಗಿದೆ. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಸಿ) ರನ್ವಯ, ಸರ್ಕಾರದ ಸಾಮಾನ್ಯ ಅಥವಾ ವಿಶೇಷ ಆದೇಶಗಳಿಗೆ ಮತ್ತು ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಸಂಬಂಧಪಟ್ಟ ಗ್ರಾಮ ಪಂಚಾಯತಿಯ ವಿನಂತಿ ಮೇರೆಗೆ ಅಥವಾ ಅನ್ಯಥಾ ಮತ್ತು ಅಧಿಸೂಚನೆಯ ಮೂಲಕ ಪ್ರಸ್ತಾಪವನ್ನು ಮೊದಲೇ ಪ್ರಕಟಿಸಿದ ತರುವಾಯ, ಯಾವುದೇ ಸಮಯದಲ್ಲಿ, ಯಾವುದೇ ಪಂಚಾಯತಿ ಪ್ರದೇಶದ ಕೇಂದ್ರ ಕಾರ್ಯಸ್ಥಾನವನ್ನು ಬದಲಾಯಿಸಲು ಜಿಲ್ಲಾಧಿಕಾರಿಗಳು ಸಕ್ಷಮ ಪ್ರಾಧಿಕಾರಿಯಾಗಿರುತ್ತಾರೆ. ಆದ್ದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಸಿ) ರನ್ವಯ ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕಿನ ತೀರ್ಥಮತ್ತೂರು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನವನ್ನು ತೀರ್ಥಮತ್ತೂರು ಗ್ರಾಮದಿಂದ ರಾಮಕೃಷ್ಣಾಪುರ ಗ್ರಾಮಕ್ಕೆ ಬದಲಾವಣೆ ಮಾಡಲು ಸರ್ಕಾರ ನಿರ್ಧರಿಸಿದೆ. ಅದರಂತೆ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 154 ಗ್ರಾಪಂಅ 2018,**
**ಬೆಂಗಳೂರು, ದಿನಾಂಕ: 30.01.2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 4, ಉಪಪ್ರಕರಣ (2), ಖಂಡ (ಸಿ) ರನ್ವಯ ಶಿವಮೊಗ್ಗ ಜಿಲ್ಲೆ, ತೀರ್ಥಹಳ್ಳಿ ತಾಲ್ಲೂಕಿನ ತೀರ್ಥಮತ್ತೂರು ಗ್ರಾಮ ಪಂಚಾಯತಿಯ ಕೇಂದ್ರ ಸ್ಥಾನವನ್ನು ತೀರ್ಥಮತ್ತೂರು ಗ್ರಾಮದಿಂದ ರಾಮಕೃಷ್ಣಾಪುರ ಗ್ರಾಮಕ್ಕೆ ಬದಲಾವಣೆ ಮಾಡಲು ಸರ್ಕಾರ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

30/1/19

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
4. ಕಾರ್ಯದರ್ಶಿಗಳು, ರಾಜ್ಯ ಚುನಾವಣಾ ಆಯೋಗ, ಬೆಂಗಳೂರು.
5. ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ, ತೀರ್ಥಹಳ್ಳಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ.
6. ಹಿರಿಯ ತಾಂತ್ರಿಕ ನಿರ್ದೇಶಕರು, ಎನ್.ಐ.ಸಿ., ಬೆಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ.
7. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ತೀರ್ಥಮತ್ತೂರು ಗ್ರಾಮ ಪಂಚಾಯತಿ, ತೀರ್ಥಹಳ್ಳಿ ತಾಲ್ಲೂಕು, ಶಿವಮೊಗ್ಗ ಜಿಲ್ಲೆ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು (ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಸಂಪಾದಕರು, ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
5. ಗಣಕ ಕೋಶ – ಇಲಾಖಾ ವೆಬ್ ಸೈಟ್ ನಲ್ಲಿ ಪ್ರಕಟಿಸಲು.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.